ಅಧ್ಯಕ್ಷರು : ಈಗ ಪ್ರಶ್ನೋತ್ತರ ಕಾಲ ಮುಕ್ತಾಯವಾಯಿತು.

ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಶ್ರೀ ಎಂ.ಸಿ. ನಾಣಯ್ಯ (ಮಾನ್ಯ ಕಾನೂನು ಸಂಸದೀಯ ಸಚಿವರು) : ಮಾನ್ಯ ಅಧ್ಯಕ್ಷರೆ 22-2-96ರ 15ನೇ ಪಟ್ಟಿಯಲ್ಲಿರುವ 41 ಪ್ರಶ್ನೆಗಳ ಪೈಕಿ 33 ಪ್ರಶ್ನೆಗಳ ಉತ್ತರವನ್ನು ಸದನದಲ್ಲಿ ಮಂಡಿಸುತ್ತೇನೆ.

ಆಶ್ರಯ ಯೋಜನೆಯಡಿಯಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಮಂಜೂರಾದ ಮನೆಗಳು

ಆಶ್ರಯ ಯೋಜನೆಯಡಿಯಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಮಂಜೂರಾದ ಮನೆಗಳು

177 - ಡಾ|| ಯು. ಚಿತ್ತರಂಜನ್ (ಭಟ್ಕಳ್) : ಮಾನ್ಯ ವಸತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1995-96ನೇ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಆಶ್ರಯ ಮನೆಗಳನ್ನು ಕಟ್ಟುವ ಗುರಿ ಎಷ್ಟು?*

ಆ) *ಈಗ ಎಷ್ಟು ಹಣ ಮಂಜೂರು ಮಾಡಲಾಗಿದೆ?*

ಇ) *ಈ ಬಗ್ಗೆ ಈಗಾಗಲೇ ಬಿಡುಗಡೆ ಆದ ಹಣವೆಷ್ಟು?*

ಈ) *ಉಳಿದ ಹಣವನ್ನು ಬಿಡುಗಡೆ ಮಾಡುವ ಯೋಜನೆ ಇದೆಯೇ?*

ಶ್ರೀ ಬಸವರಾಜ ರಾಯ್‌ರೆಡ್ಡಿ (ವಸತಿ ರಾಜ್ಯಸಚಿವರು) :

ಅ)	ಗ್ರಾಮಾಂತರ	ನಗರ	ಒಟ್ಟು
	2200	885	3085
ಆ)	44.00	216.82	656.82
ಇ)	186.36 (ರೂ. ಲಕ್ಷಗಳು)	15.99 (ರೂ. ಲಕ್ಷಗಳು)	206.50 (ಲಕ್ಷಗಳು)
	93-94ರಲ್ಲಿ ಬಿಡುಗಡೆಯಾದ ಹೆಚ್ಚುವರಿ ಹಣ	6.15	

ಈ) ಅವಶ್ಯಕತೆಗನುಸಾರವಾಗಿ ಪ್ರಗತಿಯ ವರದಿಯನ್ನಾದರಿಸಿ ಹಣವನ್ನು ಬಿಡುಗಡೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಭಟ್ಕಳದಲ್ಲಿ ಗಿರಿಜನರಿಗೆ ವಸತಿ ನಿಲಯ ಮಂಜೂರು ಮಾಡುವ ಕುರಿತು

170 Ë ಡಾ|| ಯು. ಚಿತ್ತರಂಜನ್ (ಭಟ್ಕಳ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲ್ಲೂಕಿನಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿರುವ ಪರಿಶಿಷ್ಟ ಪಂಗಡ ಹಾಗೂ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವಸತಿ ನಿಲಯವಿಲ್ಲದಿರುವುದು ನಿಜವೇ?*

ಆ) *ಹಾಗಿದ್ದಲ್ಲಿ ಭಟ್ಕಳದಲ್ಲಿ ಹೊಸದಾಗಿ ಪರಿಶಿಷ್ಟ ಪಂಗಡವರಿಗೆ ವಿದ್ಯಾರ್ಥಿ ವಸತಿ ನಿಲಯ ಸ್ಥಾಪಿಸಲಾಗುವುದು?*

ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಸಚಿವರು) :